/

(46)

# ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾ.ಕ.ಹೊ/103/2015-16 ದಿನಾಂಕ:12-04-2016

| ಅರ್ಜಿದಾರರು | ತಕರಾರುದಾರರು |
|---|---|
| 1) ಪಿಂಜಾರ ಇಮಾಂಸಾಬ್ ತಂದೆ ಲೇಟ್ ತಿಮ್ಮಲಾಪುರದ ಇಮಾಂಸಾಬ್<br>2) ಕಳ್ಳಿ ಖಾಸೀಂಸಾಬ್ ತಂದೆ ಲೇಟ್ ತಿಮ್ಮಲಾಪುರದ ಇಮಾಂಸಾಬ್<br>ಪಿಚ್ಚಾರಹಟ್ಟಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 54ಎ. 54ಬಿ/ಬಿ1. ವಿಸ್ತೀರ್ಣ 19-24. 4-00 ಎಕ್ರೆ ಜಮೀನುಗಳನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 54ಎ. 54ಬಿ/ಬಿ1. ವಿಸ್ತೀರ್ಣ 19-24. 4-00 ಎಕ್ರೆ ಜಮೀನುಗಳನ್ನು ಸದರಿ ತಾಲೂಕು ಪಿಚ್ಚಾರಹಟ್ಟಿ ಗ್ರಾಮದ ಕಳ್ಳಿ ಖಾಸೀಂಸಾಬ್ ತಂದೆ ಲೇಟ್ ತಿಮ್ಮಲಾಪುರದ ಇಮಾಂಸಾಬ್ ಇವರು ದಿನಾಂಕ 19-11-2014 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ: 22-05-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಮರಣ ದೃಡಿಕರಣ ಪತ್ರ ಲಗತ್ತಿಸಿಲ್ಲದ ಕಾರಣ ಹಾಗೂ ಮುದ್ರಾಂಕ ಶುಲ್ಕ ಪಾವತಿಸಿಲ್ಲದ ಕಾರಣ ಈ ಪ್ರಕರಣದ ಎಂ.ಆರ್ ನಂ: 55/2014-15. ದಿನಾಂಕ: 25-06-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 19-01-2016 ರಿಂದ 12-04-2016 ರ ವರೆಗೆ ವಿಚಾರಣೆ ಮಾಡಲಾಯಿತು

ವಿಚಾರಣೆಯ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 54ಎ. 54ಬಿ/ಬಿ1. ವಿಸ್ತೀರ್ಣ 19-24. 4-00 ಎಕ್ರೆ ಜಮೀನುಗಳನ್ನು ನಾವುಗಳು ಅಣ್ಣ ತಮ್ಮಂದಿರುಗಳು ದಿನಾಂಕ 19-11-2014 ರಂದು ಪಾಲು ವಿಭಾಗದ ಪತ್ರ ಬರೆಯಿಸಿ ಅದರ ಪ್ರಕಾರ ಅಳತೆ ಮಾಡಿಸಿ 11ಇ ನಕ್ಷೇಯನ್ನು ಪಡೆದಿರುತ್ತೇವೆ. ಸದರಿ ಪಾಲು ವಿಭಾಗ ಪತ್ರ ಹಾಗೂ 11ಇ. ನಕ್ಷೇಯಂತೆ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ದಿನಾಂಕ 12-04-2016 ರ ವಿಚಾರಣೆಯಲ್ಲಿ ಉಭಯರು ಹಾಜರಾಗಿದ್ದು ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆಗೆ ಕೋರಿರುವ ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿರುವ ಅರ್ಜಿಯನ್ನು ತಿರಸ್ಕರಿಸಬೇಕೆಂದು ಅರ್ಜಿ ಸಲ್ಲಿಸಿದ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**–:ಆದೇಶ:–**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಸ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 54ಎ. 54ಬಿ/ಬಿ1. ವಿಸ್ತೀರ್ಣ 19–24. 4–00 ಎಕ್ರೆ ಜಮೀನುಗಳು ಅರ್ಜಿದಾರರು ದಿನಾಂಕ 19–11–2014 ರ ಪಾಲು ವಿಭಾಗದ ಪತ್ರ ಪ್ರಕಾರ ಕೋರಿರುವ ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸುತ್ತಾ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 12–04–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಪಿಂಜಾರ ಇಮಾಂಸಾಬ್ ತಂದೆ ಲೇಟ್ ತಿಮ್ಮಲಾಪುರದ ಇಮಾಂಸಾಬ್. ಕಳ್ಳಿ ಖಾಸಿಂಸಾಬ್ ತಂದೆ ಲೇಟ್ ತಿಮ್ಮಲಾಪುರದ ಇಮಾಂಸಾಬ್ ಪಿಚ್ಚಾರಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರಿಗೆ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.